# ಚಳಿಗಾಲ ಅಧಿವೇಶನ ಸಿದ್ಧತೆ ಪರಿಶೀಲನೆ

## ಮೂರು ವರ್ಷಗಳ ನಂತರ ಬೆಳಗಾವಿಯಲ್ಲಿ ವಿಧಾನಮಂಡಲ ಅಧಿವೇಶನ

**ಉದಯಕಾಲ ನ್ಯೂಸ್**

**ಬೆಳಗಾವಿ:** ಮೂರು ವರ್ಷಗಳ ನಂತರ ಬೆಳಗಾವಿಯಲ್ಲಿ ವಿಧಾನಮಂಡಲದ ಚಳಿಗಾಲದ ಅಧಿವೇಶನ ನಡೆಯುತ್ತಿದ್ದು, ಸುಗಮ ಕಲಾಪಕ್ಕೆ ಅನುಕೂಲವಾಗುವಂತೆ ಎಲ್ಲಾ ಸಿದ್ಧತೆ ಕೈಗೊಳ್ಳ ಲಾಗುತ್ತಿದೆ.

ಬೆಳಗಾವಿಯಲ್ಲಿ ಅಧಿವೇಶನದ ಸಿದ್ಧತೆ ಕುರಿತು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಪರಿಶೀಲನೆ ನಡೆಸಿದರು.

ಬಳಿಕ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ರಾಜ್ಯದಲ್ಲಿ ಕೊರೋನಾ ಸೋಂಕಿನ ಹೊಸ ರೂಪಾಂತರ ಆತಂಕದ ನಡುವೆಯೂ ಈ ತಿಂಗಳ 13 ರಿಂದ 24ರವರೆಗೆ ಅಧಿವೇಶನ ನಡೆಸಲು ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಕೊರೋನಾ ನಿಯಂತ್ರಣ,





ಅದರ ಮುನ್ನೆಚ್ಚರಿಕೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಈಗಾಗಲೇ ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಲಾಗಿದೆ ಎಂದು ತಿಳಿಸಿದರು.

ಈ ಬಾರಿಯ ಅಧಿವೇಶನದಲ್ಲಿ ವಿದ್ಯಾರ್ಥಿಗಳಿಗೆ ಅವಕಾಶವಿಲ್ಲ. ಸಾರ್ವಜನಿಕರಿಗೆ ಅಧಿವೇಶನ ವೀಕ್ಷಿಸಲು ಅವಕಾಶ ಮಾಡಿಕೊಡಲಾಗಿದೆ. ಇನ್ನುಳಿದಂತೆ ಬೆಂಗಳೂರಿನಲ್ಲಿ ಅಧಿವೇಶನ ನಡೆಯುವ ಸಂದರ್ಭದಲ್ಲಿ ನಡೆಯುವ ಎಲ್ಲ ಕಲಾಪಗಳು ಬೆಳಗಾವಿಯಲ್ಲೂ ನಡೆಯಲಿವೆ ಎಂದರು. ಸರ್ಕಾರದಿಂದ ಇದುವರೆಗೂ ಯಾವುದೇ ಮಸೂದೆಗಳು ಬಂದಿಲ್ಲ. ಆದಷ್ಟು ಶೀಘ್ರ, ಕಳುಹಿಸುವಂತೆ ಈಗಾಗಲೇ ಸಲಹೆ ನೀಡಲಾಗಿದೆ ಎಂದು ತಿಳಿಸಿದರು.

ಪುಟ 07

## ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಸೂಚನೆ | ಅಧಿವೇಶನದ ಪೂರ್ವಸಿದ್ಧತಾ ಸಭೆ

# ಚಳಿಗಾಲದ ಅಧಿವೇಶನ ಯಶಸ್ಸಿಗೆ ಸರ್ವ ಸಿದ್ಧತೆ ಮಾಡಿಕೊಳ್ಳಿ

**ಉದಯಕಾಲ ನ್ಯೂಸ್**

**ಬೆಳಗಾವಿ:** ಇಲ್ಲಿನ ಸುವರ್ಣಸೌಧದಲ್ಲಿ ಇದೇ ಡಿ.13 ರಿಂದ 24 ರವರೆಗೆ ನಡೆಯಲಿರುವ ಚಳಿಗಾಲದ ಅಧಿವೇಶನವನ್ನು ಯಶಸ್ವಿಗೊಳಿಸಲು ಉತ್ತಮ ವಸತಿ, ಸಾರಿಗೆ, ಆಹಾರ, ಶಿಷ್ಟಾಚಾರ ಸಿದ್ಧತೆಗಳನ್ನು ಸರ್ಕಾರ, ಜಿಲ್ಲಾಡಳಿತ ಸಮರ್ಪಕವಾಗಿ ಕೈಗೊಳ್ಳಬೇಕು. ಸದ್ಯಕ್ಕೆ ಕೊರೊನಾ ಬಗ್ಗೆ ಯಾವುದೇ ಆತಂಕಗಳಿಲ್ಲ ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಸುವರ್ಣಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ನಡೆದ ಅಧಿವೇಶನದ ಪೂರ್ವಸಿದ್ಧತಾ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಅಧಿವೇಶನಕ್ಕೆ ಸಂಬಂಧಿಸಿದಂತೆ ವಿಧಾನಸಭೆ ಹಾಗೂ ವಿಧಾನಪರಿಷತ್ತಿನ ಬುಲೆಟಿನ್, ಕಾರ್ಯಕ್ರಮ ಪಟ್ಟಿ, ಕಲಾಪಗಳು, ಪ್ರಶ್ನೋತ್ತರಗಳ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಈ ಹಿಂದೆ 2018 ರ ಡಿಸೆಂಬರ್‌ನಲ್ಲಿ ಇಲ್ಲಿ ಅಧಿವೇಶನ ನಡೆದಿತ್ತು. ಅದರ ನಂತರ ಕೊರೊನಾ ಕಾರಣದಿಂದ ಮೂರುವರ್ಷಗಳ ಬಳಿಕ ಸುವರ್ಣಸೌಧದಲ್ಲಿ ಅಧಿವೇಶನ ನಡೆಯುತ್ತಿದೆ. ಕೊರೊನಾ ನಿಯಂತ್ರಣ, ಅತಿವೃಷ್ಟಿ, ವಿಧಾನಪರಿಷತ್ ಚುನಾವಣೆ ಎಲ್ಲವುಗಳ ಮಧ್ಯೆ ಅಧಿವೇಶನ ಆಯೋಜಿಸುವುದು ಸವಾಲಿನ ಕಾರ್ಯವಾಗಿದೆ. ಸಿದ್ಧತೆಗಳನ್ನು ಸರ್ಕಾರ, ಜಿಲ್ಲಾಡಳಿತ ಹಾಗೂ ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಪರಸ್ಪರ ಸಮನ್ವಯದೊಂದಿಗೆ ವಿಶ್ವಾಸಪೂರ್ಣವಾಗಿ ಆಯೋಜಿಸಬೇಕು. ಎಲ್ಲಾ ಹಂತಗಳಲ್ಲಿ ಜವಾಬ್ದಾರಿಯುತವಾಗಿ ಪರಸ್ಪರ ಸಂವಹನ ಮಾಡಬೇಕು.

ಸಚಿವರು, ಶಾಸಕರ ಹಿರಿತನ ಆಧರಿಸಿ ಸೌಕರ್ಯ ಕಲ್ಪಿಸಬೇಕು. ಎಲ್ಲರಿಗೂ ಲೇಸನ್ ಅಧಿಕಾರಿಗಳನ್ನು ನೇಮಿಸಬೇಕು. ಜವಾಬ್ದಾರಿಗಳನ್ನು ವಿಕೇಂದ್ರೀಕರಣಗೊಳಿಸಿ ಕಾರ್ಯ ಹಂಚಿಕೆ ಮಾಡಬೇಕು. ಅಧಿವೇಶನ ವೀಕ್ಷಣೆಗೆ ಸಾರ್ವಜನಿಕರಿಗೆ ಅವಕಾಶವಿದೆ. ಕೊರೊನಾ ಕಾರಣದಿಂದ ಈ ಬಾರಿ ಮಕ್ಕಳಿಗೆ ಅವಕಾಶವಿಲ್ಲ ಎಂದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಅಧಿವೇಶನವನ್ನು ಸಾಧ್ಯವಾದಷ್ಟು ಕಡಿಮೆ ಖರ್ಚಿನಲ್ಲಿ ಆಯೋಜಿಸಬೇಕು. ವಿಧಾನಸಭೆ ಹಾಗೂ ವಿಧಾನಪರಿಷತ್ತಿನ ಎಲ್ಲಾ ಸದಸ್ಯರಿಗೆ ಬೆಳಗಾವಿಯಲ್ಲಿಯೇ ವಸತಿ ಸೌಕರ್ಯ ಕಲ್ಪಿಸಿದರೆ ಸದನಕ್ಕೆ ಅವರು ಸಕಾಲದಲ್ಲಿ ಹಾಜರಾಗಲು ಅನುಕೂಲವಾಗುತ್ತದೆ ಎಂದರು.

ವಿಧಾನಸಭೆ ಉಪಸಭಾಧ್ಯಕ್ಷ ಆನಂದ ಮಾಮನಿ ಮಾತನಾಡಿ, ವಿಧಾನಮಂಡಲ ಅಧಿವೇಶನ ಅಚ್ಚುಕಟ್ಟಾಗಿ ಆಯೋಜಿಸಬೇಕು. ಅಧಿವೇಶನ ಸಮಯದಲ್ಲಿ ತಾಲೂಕು ಮಟ್ಟದಲ್ಲಿ ಗ್ರೇಡ್ 2 ತಹಸೀಲ್ದಾರರು, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು, ಪುರಸಭೆ, ಪಟ್ಟಣ ಪಂಚಾಯತಿಗಳ ಮುಖ್ಯಾಧಿಕಾರಿಗಳು ತಮ್ಮ ಕೇಂದ್ರ ಸ್ಥಾನಗಳಲ್ಲಿಯೇ ಇದ್ದು ಸ್ಥಳೀಯ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದರು.

ಲೋಕೋಪಯೋಗಿ ಇಲಾಖೆ ಮುಖ್ಯ ಅಭಿಯಂತರ ಶಂಕರಗೌಡ ಪಾಟೀಲ ಮಾತನಾಡಿ, ಸುವರ್ಣಸೌಧ ನಿರ್ವಹಣೆ ಕಾರ್ಯವನ್ನು ಕಳೆದ ಒಂದು ತಿಂಗಳಿನಿಂದ ನಿರ್ವಹಿಸಲಾಗುತ್ತಿದೆ.ಇಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ವಿವಿಧ 23 ಕಚೇರಿಗಳನ್ನು ಕೆಳಮಹಡಿಗೆ ಸ್ಥಳಾಂತರಿಸಲಾಗಿದೆ. ಆವರಣದಲ್ಲಿ ವಾಹನ ನಿಲುಗಡೆಗೆ ನೆಲ ಸಮತಟ್ಟುಗೊಳಿಸಲಾಗುತ್ತಿದೆ. ಇಂಟರ್‌ನೆಟ್, ವೆಬ್ ಕಾಸ್ಟಿಂಗ್ ಮಾಡಲು ಏರ್ಪಾಡುಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದರು.

ಅಧಿವೇಶನದ ವಿಶೇಷಾಧಿಕಾರಿ ಡಾ.ಸುರೇಶ ಇಟ್ನಾಳ ಮಾತನಾಡಿ, 2018 ರ ದರದಲ್ಲಿಯೇ ಹೋಟೆಲ್ ರೂಮುಗಳನ್ನು ಒದಗಿಸಲು ಈಗಾಗಲೇ ತಿಳಿಸಲಾಗಿದೆ. ಸಾರಿಗೆ ವ್ಯವಸ್ಥೆ ಮಾಡಿಕೊಳ್ಳಲಾಗುತ್ತಿದೆ ಎಂದರು.

ವಿಧಾನಸಭೆ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ, ವಿಧಾನಪರಿಷತ್ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮೀ, ಜಿಲ್ಲಾಧಿಕಾರಿ ಆರ್. ವೆಂಕಟೇಶಕುಮಾರ, ಬೆಳಗಾವಿ ನಗರ ಪೊಲೀಸ್ ಆಯುಕ್ತ ಡಾ.ಕೆ.ತ್ಯಾಗರಾಜನ್, ಅಧಿವೇಶನ ವಿಶೇಷಾಧಿಕಾರಿ ಡಾ.ಸುರೇಶ ಇಟ್ನಾಳ ಇಲಾಖೆ ಅಧಿಕಾರಿಗಳು ಭಾಗಿಯಾಗಿದ್ದರು.



**ಬುಲೆಟಿನ್, ಕಾರ್ಯಕ್ರಮ ಪಟ್ಟಿ, ಕಲಾಪ, ಪ್ರಶ್ನೋತ್ತರಗಳ ಸಿದ್ಧತೆ**

**ಪರಸ್ಪರ ಸಮನ್ವಯದೊಂದಿಗೆ ವಿಶ್ವಾಸಪೂರ್ಣ ಸಿದ್ಧತೆಯಾಗಲಿ**

# ಚಳಿಗಾಲ ಅಧಿವೇಶನ ಸಿದ್ಧತೆ ಪರಿಶೀಲನೆ

ಸದನದಲ್ಲಿ ಚೌಕಟ್ಟು ಮೀರಿ ವರ್ತಿಸಿದರೆ ಅಂತಹ ಸದಸ್ಯರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ರಚನಾತ್ಮಕ ಫಲಪ್ರದ ಚರ್ಚೆ ನಡೆಯಬೇಕು ಎನ್ನುವುದು ನಮ್ಮ ಉದ್ದೇಶ. ಇತ್ತೀಚೆಗೆ ರಾಜ್ಯಸಭೆಯಲ್ಲಿ ನಡೆಯುತ್ತಿರುವ ಘಟನೆಗಳು ತೀವ್ರ ವಿಷಾದಕರ ಎಂದು ಹೇಳಿದರು.

ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಆಯಾ ದಿನದ ಕಲಾಪ ಪಟ್ಟಿಯಲ್ಲಿ ನಮೂದಾಗುವ ವಿಷಯಗಳು ಅಂದೇ ಪೂರ್ಣಗೊಳ್ಳಬೇಕು. ಈ ಸಂಬಂಧ ಕಲಾಪ ಸಲಹಾ ಸಮಿತಿಯಲ್ಲಿ ಎಲ್ಲ ರಾಜಕೀಯ ಪಕ್ಷಗಳ ನಾಯಕರಿಗೆ ಈ ವಿಷಯದ ಕುರಿತು ಮನವರಿಕೆ ಮಾಡಿಕೊಡಲಾಗುವುದು ಎಂದು ಹೇಳಿದರು.

ಸ್ಥಳೀಯ ಸಂಸ್ಥೆಗಳಿಂದ ವಿಧಾನಪರಿಷತ್ತಿನ 25 ಸ್ಥಾನಗಳಿಗೆ ಈ ತಿಂಗಳ 10 ರಂದು ಚುನಾವಣೆ ನಡೆಯಲಿದ್ದು, ಅದರಲ್ಲಿ ಸ್ಪರ್ಧಿಸಿರುವ ಹಾಲಿ ಸದಸ್ಯರಿಗೆ ಮುಂದಿನ ವರ್ಷ ಜನವರಿ 5ರ ತನಕ ಸದಸ್ಯರಾಗಿ ಮುಂದುವರಿಯುವ ಎಲ್ಲ ಅಧಿಕಾರಗಳಿವೆ. ಹೀಗಾಗಿ, ಅವರು ಈ ಅಧಿವೇಶನದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಬೆಳಗಾವಿಯಲ್ಲಿ ಶಾಸಕರ ಭವನ ಮತ್ತು ಸಚಿವಾಲಯ ಕಚೇರಿಯನ್ನು ನಿರ್ಮಾಣ ಮಾಡುವಂತೆ ಈಗಾಗಲೇ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ. ಇದರಿಂದ ಖರ್ಚು, ವೆಚ್ಚ ಕಡಿಮೆ ಮಾಡಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

Udayakala 03.12.2021